ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

9

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 15/3/21

# ಇಂದಿನಿಂದ ಬಜೆಟ್ ಮೇಲಿನ ಚರ್ಚೆ

## ಸದನದಲ್ಲಿ ಸಿಡಿ ಸದ್ದು ಹೆಚ್ಚಿಸಲು ಪ್ರತಿಪಕ್ಷ ತಂತ್ರ ಪ್ರತಿತಂತ್ರ ಹೂಡಲು ಆಡಳಿತ ಪಕ್ಷ ಸಿದ್ಧತೆ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಸದನದಲ್ಲಿ ಸೋಮವಾರದಿಂದ ಬಜೆಟ್ ಮೇಲಿನ ಚರ್ಚೆ ನಡೆಯಲಿದ್ದು, ಇದಕ್ಕೆ ಪ್ರತಿಪಕ್ಷಗಳು ಅಡ್ಡಿಪಡಿಸುವ ಸಾಧ್ಯತೆ ಇದೆ.

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಕಳೆದ ವಾರ ವಿಧಾನಸಭೆಯಲ್ಲಿ ಜನಸ್ನೇಹಿ ಬಜೆಟ್ ಮಂಡಿಸಿದ್ದರು. ಸೋಮವಾರ ನಡೆಯುವ ಕಲಾಪದ ವೇಳೆ ಬಜೆಟ್ ಮೇಲಿನ ಚರ್ಚೆ ಬರಲಿದೆ. ಆದರೆ ಪ್ರತಿಪಕ್ಷದ ನಾಯಕರು ಮಾಜಿ ಸಚಿವ ರಮೇಶ್ ಜಾರಕಿಹೊಳಿ ಸಿಡಿ. ಪ್ರಕರಣವನ್ನೇ ಅಸ್ತ್ರವನ್ನಾಗಿ ಬಳಸಿಕೊಂಡು ಪ್ರತಿಭಟನೆ ನಡೆಸಿ, ಬಜೆಟ್ ಮೇಲಿನ ಚರ್ಚೆಗೆ ಅಡ್ಡಿಪಡಿಸುವ ಸಾಧ್ಯತೆ ಇದೆ.

ಈ ಸಂಬಂಧ ವಿಧಾನಸಭೆ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಮಾತನಾಡಿ, 'ಮಾಜಿ ಸಚಿವ ಜಾರಕಿಹೊಳಿ ಸಿಡಿ ಪ್ರಕರಣದ ಸಂಬಂಧ ಸದನದಲ್ಲಿ ಸರಕಾರವನ್ನು ಪ್ರಶ್ನಿಸುತ್ತೇನೆ' ಎಂದು ಹೇಳಿಕೆ ನೀಡಿದ್ದಾರೆ.

ಇದಕ್ಕೆ ಸಿಎಂ ಪ್ರತಿಕ್ರಿಯಿಸಿದ್ದು, 'ಸಿದ್ದರಾಮಯ್ಯ ಅವರ ಹೇಳಿಕೆ ಸ್ವಾಗತಾರ್ಹ' ಎಂದು ಹೇಳಿದ್ದಾರೆ.

**ಇಂದು ಸಚಿವರ ಸಭೆ**

ಸಿಡಿ ಪ್ರಕರಣ, ಬೆಲೆ ಏರಿಕೆಗಳನ್ನು ನೆಪ ಮಾಡಿಕೊಂಡು ವಿರೋಧ ಪಕ್ಷಗಳು ಮುಗಿಬೀಳುವ ಹಿನ್ನೆಲೆಯಲ್ಲಿ ಸಿಎಂ ಯಡಿಯೂರಪ್ಪ ಅವರು ಸಚಿವರ ಸಭೆ ಕರೆದಿದ್ದಾರೆ. ಬೆಳಗ್ಗೆ ವಿಧಾನಸೌಧದಲ್ಲಿ ನಡೆಯುವ ಅನೌಪಚಾರಿಕ ಸಭೆಯಲ್ಲಿ ಸದನದಲ್ಲಿ ವಿಪಕ್ಷಗಳ ದಾಳಿಯನ್ನು ಮೆಟ್ಟಿ ನಿಲ್ಲುವುದು, ಅವರ ಆರೋಪಗಳಿಗೆ ತಕ್ಕದಾದ ರೀತಿಯಲ್ಲಿ ಉತ್ತರ ನೀಡುವುದು ಸೇರಿದಂತೆ ಇನ್ನಿತರ ವಿಷಯಗಳ ಚರ್ಚೆ ನಡೆಯಲಿದೆ. ಸಿಡಿ ಪ್ರಕರಣದ ಸಂಬಂಧ ಆಗಿರುವ ಬೆಳವಣಿಗೆಗಳ ಬಗ್ಗೆಯೂ ಸಭೆಯಲ್ಲಿ ಚರ್ಚೆ ನಡೆಯಲಿದೆ. ಸಭೆಯ ನಂತರ ಉಭಯ ಸದನಗಳಲ್ಲಿ ಕಲಾಪ ಆರಂಭವಾಗಲಿದೆ.